ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1087/2022**

| | | |
|---|---|---|
| ಸಾಕ್ಷಿಯ ಹೆಸರು | : ಮಲ್ಲಿಕಾರ್ಜುನ | ಸಿ.ಡಬ್ಲ್ಯು 12 |
| ತಂದೆಯ ಹೆಸರು | : ಜನಾರ್ಧನ | ಪಿ.ಡಬ್ಲ್ಯು 4 |
| ವಯಸ್ಸು | : 48 ವರ್ಷ | |
| ಉದ್ಯೋಗ | : ಮುಖ್ಯಪೇದೆ,ಕ ಡೂರು | |
| ವಾಸ ಸ್ಥಳ | : ಕಡೂರು | |

ದಿನಾಂಕಃ**29-07-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2017 ರಿಂದ 2022 ರ ಮಧ್ಯೆದಲ್ಲಿ ತರೀಕೆರೆ ಠಾಣೆಯಲ್ಲಿ ಮುಖ್ಯ ಪೇದೆ ಎಂದು ಕೆಲಸ ಮಾಡಿದ್ದೇನೆ. ಈ ಪ್ರಕರಣದಲ್ಲಿ ದಿಃ26-6-2021 ರಂದು ರಾತ್ರಿ 9-45 ಗಂಟೆ ಸುಮಾರಿಗೆ ನಾನು ಠಾಣೆಯಲ್ಲಿ ಇದ್ದಾಗ ಚಾ.ಸಾ-1 ರವರು ನೀಡಿದ ದೂರು, ಅಮಾನತ್ತು ಪಂಚನಾಮೆಯನ್ನು ಸ್ವೀಕರಿಸಿಕೊಂಡು ಪ್ರ.ವ.ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಕಳುಹಿಸಿದ್ದೇನೆ. ಮುದ್ದೆಮಾಲು ಮತ್ತು ಆರೋಪಿಯನ್ನು ನನ್ನ ವಶಕ್ಕೆ ಪಡೆದಿದ್ದೇನೆ. ಆರೋಪಿಯ ವಿರುದ್ದ ದಸ್ತಗಿರಿ ಕ್ರಮವನ್ನು ಅನುಸರಿಸಿ ಮಾರನೇ ದಿನ ನ್ಯಾಯಾಲಯದ ಮುಂದೆ ಹಾಜರುಮಾಡಿದ್ದೇನೆ ಮತ್ತು ಸ್ವತ್ತು ಪಟ್ಟಿಯನ್ನು ಸಲ್ಲಿಸಿದ್ದೇನ. ಅದೇ ದಿನ ಚಾ.ಸಾ-2 ರಿಂದ 10 ರವರ ಹೇಳಿಕೆಗಳನ್ನು ಪಡೆದುಕೊಂಡಿದ್ದೇನೆ. ನನಗೆ ವರ್ಗಾವಣೆ ಆದ ಪ್ರಯುಕ್ತ ಪ್ರಕರಣದ ಕಡತವನ್ನು ಚಾ,ಸಾ-13 ರವರಿಗೆ ವಹಿಸಿಕೊಟ್ಟಿದ್ದೇನೆ. ನಿ.ಪಿ-1 ನ್ನು ಸಾಕ್ಷಿಯು ನೋಡಿ ಗುರುತಿಸುತ್ತಾರೆ. ಚಾ.ಸಾ-1 ರವರು ಹಾಜರುಪಡಿಸಿದ ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ-2 ಮತ್ತು ಸಾಕ್ಷಿಯ ಸಹಿಯನ್ನು ನಿ.ಪಿ-2(ಎ) ಎಂದು, ಪ್ರ.ವ.ವರದಿಯನ್ನು ನಿ.ಪಿ-3 ಎಂದು ಗುರುತಿಸಲಾಯಿತು. ಮು.ಮಾ-1 ಮತ್ತು ಆರೋಪಿಯನ್ನು ನೋಡಿ ಗುರುತಿಸುತ್ತೇನೆ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ಚಾ.ಸಾ-1 ನನ್ನ ಮೇಲಾಧಿಕಾರಿ ಎಂದರೆ ಸರಿ, ಆ ಕಾರಣಕ್ಕೆ ಅವರು ಹೇಳಿದ ಹಾಗೆ ನಿ.ಪಿ-2 ಮತ್ತು 3 ನ್ನು ತಯಾರಿಸಿ ಆರೋಪಿಯ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಸಾಕ್ಷಿದಾರರ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿ ನಾನು ಹೇಳಿದ ಹಾಗೆ ಯಾವುದೇ ತಪ್ಪು ಮಾಡಿಲ್ಲ ಎಂದರೆ ಸರಿಯಲ್ಲ.

<u>ಮರುವಿಚಾರಣೆ :</u> ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.